FEBRUARY 11, 2026

ALL INDIA RADIO- DHARWAD

PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ರಾಜ್ಯ ಮುಂಗಡ ಪತ್ರ ಮಂಡನೆ ಹಿನ್ನೆಲೆ: ವಿವಿಧ ಇಲಾಖೆಗಳ ಸಚಿವರು, ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಭೆ, ಸಮಾಲೋಚನೆ.

- ನಿಗಮ ಮಂಡಳಿ ಅಧ್ಯಕ್ಷರಿಗೆ ಸಚಿವ ಸಂಪುಟ ದರ್ಜೆ ಸ್ಥಾನಮಾನ– ಸರ್ಕಾರದಿಂದ ಜನರ ತೆರಿಗೆ ಹಣ ಪೋಲು: ವಿಪಕ್ಷ ನಾಯಕ ಆರ್.ಅಶೋಕ ಅಸಮಾಧಾನ.

- ವಿಧಾಯಕ ಕಾರ್ಯಕ್ರಮಗಳ ಮೂಲಕ ರಾಜ್ಯಾದ್ಯಂತ ನಿನ್ನೆ ಕಾಯಕ ಶರಣರ ಜಯಂತಿ ಆಚರಣೆ.

- ರಾಜ್ಯದಲ್ಲಿ ಬಾಲ ಕಾರ್ಮಿಕ ಪದ್ಧತಿ ಸಂಪೂರ್ಣ ನಿರ್ಮೂಲನೆ ಮತ್ತು ವಲಸೆ ಕಾರ್ಮಿಕರ ಕಲ್ಯಾಣದ ನಿಟ್ಟಿನಲ್ಲಿ ಕಾರ್ಮಿಕ ಇಲಾಖೆ ಮಹತ್ವದ ನಿರ್ಧಾರ.

ಈಗ ವಾರ್ತೆಗಳ ವಿವರ

*******

2026–27 ನೇ ಸಾಲಿನ ರಾಜ್ಯ ಮುಂಗಡ ಪತ್ರ ಮಂಡನೆ ಹಿನ್ನೆಲೆಯಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಬೆಂಗಳೂರಿನಲ್ಲಿಂದು ವಿವಿಧ ಇಲಾಖೆಗಳ ಸಚಿವರು, ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಸಮಾಲೋಚಿಸಿದರು. ಇಂಧನ, ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖಿಕ ಇಲಾಖೆ, ಕಂದಾಯ ಇಲಾಖೆಯ ಸಚಿವರು, ಅಧಿಕಾರಿಗಳೊಂದಿಗೆ ಸಮಾಲೋಚಿಸಿದ ಮುಖ್ಯಮಂತ್ರಿ ಅವರು, ಇಲಾಖೆಯ ಅನುದಾನದ ಬೇಡಿಕೆ, ಮುಂದಿನ ಆರ್ಥಿಕ ವರ್ಷದಲ್ಲಿ ಇಲಾಖಾ ವತಿಯಿಂದ ಜಾರಿಗೊಳಿಸಲು ಉದ್ದೇಶಿಸಿರುವ, ನೂತನ ಕಾರ್ಯಕ್ರಮಗಳ ಕುರಿತು ವಿವರ ಪಡೆದರು.

*******

ನಿಗಮ ಮಂಡಳಿ ಅಧ್ಯಕ್ಷರಿಗೆ ಸಚಿವ ಸಂಪುಟ ದರ್ಜೆ ಸ್ಥಾನಮಾನ ನೀಡುವ ಮೂಲಕ, ರಾಜ್ಯ ಸರ್ಕಾರ ಜನರ ತೆರಿಗೆ ಹಣವನ್ನು ಪೋಲು ಮಾಡುತ್ತಿದೆ ಎಂದು, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಸರ್ಕಾರದ ಬಳಿ ಸಂಬಳ ಕೊಡಲು ಹಣವಿಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರ ಜೊತೆಗೆ, ಗೃಹಲಕ್ಷ್ಮೀ ಮತ್ತು ಅನ್ನಭಾಗ್ಯಕ್ಕೆ ಹಣ ಕೊಡಲು ರಾಜ್ಯ ಸರ್ಕಾರಕ್ಕೆ ಸಾಧ್ಯವಾಗಿಲ್ಲ. ನಿಗಮ

ಮಂಡಳಿಗೆ ಅನುದಾನವನ್ನು ನೀಡಿಲ್ಲ. ಹೀಗಿದ್ದರೂ, ಅಧ್ಯಕ್ಷರಿಗೆ ಸಂಪುಟ ದರ್ಜೆ ಸ್ಥಾನಮಾನ ನೀಡಿರುವ ಕ್ರಮ ಸರಿಯಾದುದಲ್ಲ. ಅದನ್ನು ಕೂಡಲೇ ರದ್ದು ಮಾಡಬೇಕೆಂದು ಒತ್ತಾಯಿಸಿದ್ದಾರೆ.

*******

ಗ್ರಾಮೀಣ ಭಾಗಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಸರ್ಕಾರ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಹೇಳಿದ್ದಾರೆ. ಶಹಾಪುರ ತಾಲ್ಲೂಕಿನ ಸಲಾದಪುರ ಗ್ರಾಮದಿಂದ ಹಜರತ್ ಮರ್ಧಾನ ಸಾಹೇಬ ದರ್ಗಾವರೆಗೆ ಕೈಗೊಂಡಿರುವ ರಸ್ತೆ ನಿರ್ಮಾಣ ಕಾಮಗಾರಿ ಉದ್ಘಾಟಿಸಿ ಮಾತನಾಡಿದ ಅವರು, ವಿಶೇ ವಾಗಿ ಗ್ರಾಮೀಣ ಭಾಗದ ರಸ್ತೆಗಳ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದೆ. ಗ್ಯಾರಂಟಿ ಯೋಜನೆಗಳ ಕಾರಣ ಅಭಿವೃದ್ಧಿ ಸ್ಥಗಿತಗೊಂಡಿದೆ ಎಂಬ ವಿಪಕ್ಷಗಳ ಆರೋಪಗಳಲ್ಲಿ ಹುರುಳಿಲ್ಲ. ಪ್ರತಿಪಕ್ಷಗಳು ಗ್ರಾಮೀಣ ಭಾಗಗಳಿಗೆ ಭೇಟಿ ನೀಡಿ ನಡೆಯುತ್ತಿರುವ ರಸ್ತೆ ಅಭಿವೃದ್ಧಿ ಕಾರ್ಯಗಳನ್ನು ಗಮನಿಸಬೇಕು ಎಂದರು. ರಸ್ತೆ ನಿರ್ಮಾಣದ ಜೊತೆಗೆ ಕುಡಿಯುವ ನೀರು, ಚರಂಡಿ ವ್ಯವಸ್ಥೆ ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಎಂದು ಸಚಿವರು ಹೇಳಿದರು.

*******

ರಾಜ್ಯಾದ್ಯಂತ ನಿನ್ನೆ ಕಾಯಕ ಶರಣರ ಜಯಂತಿ ಆಚರಿಸಲಾಯಿತು. ಜಯಂತಿ ಪ್ರಯುಕ್ತ ವಿವಿಧ ಜಿಲ್ಲಾಡಳಿತಗಳು ವಿಧಾಯಕ ಕಾರ್ಯಕ್ರಮಗಳನ್ನು ಆಯೋಜಿಸಿದ್ದವು. ಕಾಯಕ ಶರಣರಾದ ಮಾದಾರ ಚೆನ್ನಯ್ಯ, ಮಾದಾರ ದೂಳಯ್ಯ, ಡೋಹರ ಕಕ್ಕಯ್ಯ, ಸಮಗಾರ ಹರಳಯ್ಯ, ಉರಿಲಿಂಗ ಪೆದ್ದರ ಭಾವಚಿತ್ರ ಮೆರವಣಿಗೆ, ವಿಶೇಷ ಉಪನ್ಯಾಸ, ವಚನ ಗಾಯನ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣ ಸಮಿತಿ ವತಿಯಿಂದ ಕಾಯಕ ಶರಣರ ಜಯಂತಿ ಕಾರ್ಯಕ್ರಮವನ್ನು ಸಂಭ್ರಮದಿಂದ ಆಚರಿಸಲಾಯಿತು. ಶಾಸಕ ಧೀರಜ್ ಮುನಿರಾಜು ಕಾರ್ಯಕ್ರಮ ಉದ್ಘಾಟಿಸಿದರು. ಶಿವಮೊಗ್ಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನು ್ಠಾನ ಪ್ರಾಧಿಕಾರದ ಅಧ್ಯಕ್ಷ ಸಿ.ಎಸ್.ಚಂದ್ರಭೂಪಾಲ, ಕಾಯಕ ಶರಣರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ, ಜಯಂತೋತ್ಸವಕ್ಕೆ ಚಾಲನೆ ನೀಡಿದರು. 12 ನೇ ಶತಮಾನದಲ್ಲಿ ಕಲ್ಯಾಣದಲ್ಲಿ ನಡೆದ ವಚನಕ್ರಾಂತಿ ಜಾಗತಿಕ ಮಹತ್ವ ಹೊಂದಿದೆ. ಬಸವಣ್ಣನವರ ನೇತೃತ್ವದಲ್ಲಿ ಅನೇಕ ಶರಣರು ರಚಿಸಿರುವ ವಚನಗಳಲ್ಲಿ ಜೀವನ ಮೌಲ್ಯಗಳಿವೆ. ಕಾಯಕ ಮತ್ತು ದಾಸೋಹ ಅವರು ನೀಡಿದ ಅಮೂಲ್ಯ ಕೊಡುಗೆಗಳು ಎಂದು ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ್ ಸನದಿ ಹೇಳಿದರು. ಧಾರವಾಡದಲ್ಲಿ ನಡೆದ ಕಾಯಕ ಶರಣರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಗದಗನಲ್ಲಿ ನಡೆದ ಕಾಯಕ ಶರಣರಾದ ಮಾದಾರ ಚೆನ್ನಯ್ಯ, ಸಮಗಾರ ಹರಳಯ್ಯ ಹಾಗೂ ಡೋಹರ ಕಕ್ಕಯ್ಯನವರ ಜಯಂತ್ಯುತ್ಸವ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಜ್ಯೋತಿ ಬೆಳಗಿಸಿ ಚಾಲನೆ ನೀಡಿದರು. ರಾಜ್ಯದ ವಿವಿಧ ಜಿಲ್ಲೆ ಮತ್ತು ತಾಲ್ಲೂಕುಗಳಲ್ಲಿ ಕಾಯಕ ಶರಣರ ಜಯಂತಿ ಆಚರಿಸಿದ ವರದಿಗಳು ಬಂದಿವೆ.

*******

2024–25ನೇ ಸಾಲಿನಲ್ಲಿ, ಕರ್ನಾಟಕ ರಾಜ್ಯ ಬೀಜ ನಿಗಮ ಅತ್ಯುತ್ತಮ ಆರ್ಥಿಕ ಪ್ರಗತಿ ಸಾಧಿಸಿದ್ದು, ರಾಜ್ಯ ಸರ್ಕಾರಕ್ಕೆ ತನ್ನ ಲಾಭಾಂಶದ ಪಾಲು 1 ಕೋಟಿ 69 ಲಕ್ಷ ರೂಪಾಯಿಗಳ ಚೆಕ್ಕನ್ನು ಹಸ್ತಾಂತರಿಸಿದೆ. 2024–25ನೇ ಹಣಕಾಸು ವ ರ್ಷದಲ್ಲಿ ನಿಗಮ ಒಟ್ಟು 349.72 ಕೋಟಿ ವಹಿವಾಟು ನಡೆಸಿದ್ದು, ಈ ಅವಧಿಯಲ್ಲಿ 13.48 ಕೋಟಿ ರೂಪಾಯಿಗಳ ನಿವ್ವಳ ಲಾಭ ಗಳಿಸಿದೆ. ನಿವ್ವಳ ಲಾಭದ ಶೇಕಡಾ 30 ರ ಷ್ಟು ಲಾಭಾಂಶದ ರೂಪದಲ್ಲಿ ರಾಜ್ಯ ಸರ್ಕಾರಕ್ಕೆ ನೀಡಿದೆ. ಬೆಂಗಳೂರಿನ ಅರಮನೆ ಮೈದಾನದ ತ್ರಿಪುರವಾಸಿನಿಯಲ್ಲಿ ನಡೆದ ಅಂತರಾಷ್ಟ್ರೀಯ ವಾಣಿಜ್ಯ ಮೇಳದಲ್ಲಿ, ಕೃಷಿ ಸಚಿವ ಚಲುವರಾಯಸ್ವಾಮಿ ಅವರ ಸಮ್ಮುಖದಲ್ಲಿ, ಬೀಜ ನಿಗಮದ ಅಧ್ಯಕ್ಷ ಎಂ.ಅಂಜನಪ್ಪ, ಲಾಭಾಂಶದ ಚೆಕ್‌ನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹಸ್ತಾಂತರಿಸಿದರು.

*******

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ–42 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ರಾಜ್ಯದಲ್ಲಿ ಬಾಲ ಕಾರ್ಮಿಕ ಪದ್ಧತಿ ಸಂಪೂರ್ಣ ನಿರ್ಮೂಲನೆ ಮತ್ತು ವಲಸೆ ಕಾರ್ಮಿಕರ ಕಲ್ಯಾಣದ ನಿಟ್ಟಿನಲ್ಲಿ ಕಾರ್ಮಿಕ ಇಲಾಖೆ ಮಹತ್ವದ ನಿರ್ಧಾರ ಕೈಗೊಂಡಿದೆ. ಈ ಹಿಂದೆ ಅಸ್ತಿತ್ವದಲ್ಲಿದ್ದ "ಕರ್ನಾಟಕ ರಾಜ್ಯ ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನಾ ಯೋಜನಾ ಸೊಸೈಟಿ" ಯ ಹೆಸರು ಬದಲಾಯಿಸಿ, ಅದರ ಕಾರ್ಯವ್ಯಾಪ್ತಿ ವಿಸ್ತರಿಸಲಾಗಿದೆ. ಇನ್ನು ಮುಂದೆ ಈ ಸಂಸ್ಥೆಯು "ಕರ್ನಾಟಕ ರಾಜ್ಯ ಬಾಲ ಹಾಗೂ ಕಿಶೋರ ಕಾರ್ಮಿಕರ ಮತ್ತು ವಲಸೆ ಕಾರ್ಮಿಕರ ಕಲ್ಯಾಣ ಮತ್ತು ಪುನರ್ವಸತಿ ಸೊಸೈಟಿ" ಎಂದು ಅಧಿಕೃತವಾಗಿ ಗುರುತಿಸಲ್ಪಡುತ್ತದೆ. ಈ ಹಿಂದೆ ಕೇವಲ ಬಾಲ ಕಾರ್ಮಿಕರ ನಿರ್ಮೂಲನೆಗೆ ಸೀಮಿತವಾಗಿದ್ದ ಸೊಸೈಟಿ, ಇನ್ನು ಮುಂದೆ ರಾಜ್ಯದಾದ್ಯಂತ ಇರುವ ವಲಸೆ ಕಾರ್ಮಿಕರ ಸಾಮಾಜಿಕ ಭದ್ರತೆ, ಕಲ್ಯಾಣ ಮತ್ತು ಅವರ ಕುಟುಂಬಗಳ ಶೈಕ್ಷಣಿಕ ಅಭಿವೃದ್ಧಿ ಸೇರಿದಂತೆ ಪುನರ್ವಸತಿ ಸೌಲಭ್ಯ ಸೇರಿದಂತೆ ಹಲವು ಬದಲಾವಣೆಗಳನ್ನು ತಂದಿದೆ.

*******

ಭಾರತೀಯ ರೈಲ್ವೆ ತನ್ನ ಅಧಿಕೃತ 'ಆಲ್–ಇನ್–ಒನ್' ಸೂಪರ್ ಆಪ್ 'ರೈಲ್‌ಒನ್' ಬಿಡುಗಡೆ ಮಾಡಿದ್ದು, ಈ ಆಪ್ ಹಲವು ವಿಶೇಷತೆಗಳನ್ನು ಹೊಂದಿದೆ. ಇದು ಪ್ರಯಾಣಿಕರಿಗೆ ಹಲವಾರು ರೈಲ್ವೆ ಸೇವೆಗಳನ್ನು ಪಡೆಯಲು ಸುಲಭ ಮತ್ತು ಅನುಕೂಲಕರ ಡಿಜಿಟಲ್ ವೇದಿಕೆ ಒದಗಿಯಾಗಿದ್ದು, ಈ ಆಪ್ ಮೂಲಕ ಪ್ರಯಾಣಿಕರು ಕಾಯ್ದಿರಿಸಿದ, ಕಾಯ್ದಿರಿಸದ ಟಿಕೆಟ್‌ಗಳು, ಪ್ಲ್ಯಾಟಫಾರ್ಮ ಮತ್ತು ಸೀಸನ್ ಟಿಕೆಟ್‌ಗಳನ್ನು ಬುಕ್ ಮಾಡಬಹುದು. ಇದರೊಂದಿಗೆ ರೈಲುಗಳ ಹುಡುಕಾಟ, ಪಿಎನ್‌ಆರ್ ಸ್ಥಿತಿ, ಕೋಚ್ ವಿವರ ಮತ್ತು ರೈಲು ಎಲ್ಲಿದೆ ಎಂಬ ನೈಜ ಸಮಯದ ಮಾಹಿತಿ ಸೇರಿದಂತೆ ಹಲವು ಸುಧಾರಿತ ವೈಶಿ ಷ್ಟ್ಯಗಳನ್ನು ಈ ಆಪ್ ಒದಗಿಸುತ್ತದೆ. ಭಾರತೀಯ ರೈಲ್ವೆ ತನ್ನ ಹಳೆಯ ಯುಟಿಎಸ್ ಆನ್ ಮೊಬೈಲ್' ಆಪ್ ಸೇವೆಗಳನ್ನು ಬರುವ ಮಾರ್ಚ್ 1, ರಿಂದ ಹಂತ ಹಂತವಾಗಿ ಸ್ಥಗಿತಗೊಳಿಸಲಿದೆ

*******

ಪರ್ಯಾಯ ಇಂಧನ ಉತ್ಪಾದನೆ ಮತ್ತು ಬಳಕೆಗೆ, ಕಳೆದ 10 ವರ್ಷಗಳಲ್ಲಿ, ಅತೀ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು, ಕೇಂದ್ರ ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. 2004 ರಿಂದ 2014 ರ ಅವಧಿಯಲ್ಲಿ ಈ ವಲಯಕ್ಕೆ ಕೇವಲ 8 ಸಾವಿರದ 8 ನೂರಾ 15 ಕೋಟಿ ರೂಪಾಯಿ ಒದಗಿಸಿದ್ದರೆ, 2014 ರಿಂದೀಚೆಗೆ 1 ಲಕ್ಷ 26 ಸಾವಿರದ 301 ಕೋಟಿ ರೂಪಾಯಿ ವಿನಿಯೋಗಿಸಲಾಗಿದೆ ಎಂದಿದ್ದಾರೆ. ಹಸಿರು ಜಲಜನಕ ವಲಯದಲ್ಲಿ, ಪ್ರಸ್ತುತ ಭಾರತ ಜಾಗತಿಕ ನಾಯಕನಾಗಿದ್ದು, 2028ರ ವೇಳೆಗೆ, 5 ದಶಲಕ್ಷ ಮೆಟ್ರಿಕ್ ಟನ್ ಉತ್ಪಾದಿಸುವ ಗುರಿ ಹಾಕಿಕೊಳ್ಳಲಾಗಿದೆ. ಹಸಿರು ಅಮೋನಿಯಾ ಉತ್ಪಾದನೆಗೆ ಉತ್ತೇಜನ ನೀಡಲಾಗಿದ್ದು, ಪ್ರಸ್ತುತ ವಾರ್ಷಿಕ 7.24 ಲಕ್ಷ ಟನ್ ಹಸಿರು ಅಮೋನಿಯಾ ಉತ್ಪಾದಿಸಲಾಗುತ್ತಿದೆ. ರಸಗೊಬ್ಬರಕ್ಕೆ ಅಗತ್ಯವಾದ ಶೇಕಡ 30 ರಷ್ಟು ಪ್ರಮಾಣ ಪೂರೈಕೆ ಮಾಡಲಾಗುತ್ತಿದೆ ಎಂದು ಸಚಿವರು ರಾಜ್ಯಸಭೆಗೆ ಮಾಹಿತಿ ನೀಡಿದ್ದಾರೆ.

*******

ಜಜುಸರಕಾರಿ ಇಲಾಖೆಗಳ ಹಾಸ್ಟೆಲ್ ಕಟ್ಟಡಗಳನ್ನು ನಿರ್ಮಿಸಲು ಜಮೀನನ್ನು ತ್ವರಿತವಾಗಿ ಮಂಜೂರುಗೊಳಿಸುವಂತೆ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆ ಕಾರ್ಯದರ್ಶಿ ಸಮೀರ್ ಶುಕ್ಲಾ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಈ ಸೂಚನೆ ನೀಡಿದರು.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ರಾಜ್ಯ ಮುಂಗಡ ಪತ್ರ ಮಂಡನೆ ಹಿನ್ನೆಲೆ: ವಿವಿಧ ಇಲಾಖೆಗಳ ಸಚಿವರು, ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಭೆ, ಸಮಾಲೋಚನೆ.

ನಿಗಮ ಮಂಡಳಿ ಅಧ್ಯಕ್ಷರಿಗೆ ಸಚಿವ ಸಂಪುಟ ದರ್ಜೆ ಸ್ಥಾನಮಾನ– ಸರ್ಕಾರದಿಂದ ಜನರ ತೆರಿಗೆ ಹಣ ಪೋಲು: ವಿಪಕ್ಷ ನಾಯಕ ಆರ್.ಅಶೋಕ ಅಸಮಾಧಾನ.

ವಿಧಾಯಕ ಕಾರ್ಯಕ್ರಮಗಳ ಮೂಲಕ ರಾಜ್ಯಾದ್ಯಂತ ನಿನ್ನೆ ಕಾಯಕ ಶರಣರ ಜಯಂತಿ ಆಚರಣೆ.

ರಾಜ್ಯದಲ್ಲಿ ಬಾಲ ಕಾರ್ಮಿಕ ಪದ್ಧತಿ ಸಂಪೂರ್ಣ ನಿರ್ಮೂಲನೆ ಮತ್ತು ವಲಸೆ ಕಾರ್ಮಿಕರ ಕಲ್ಯಾಣದ ನಿಟ್ಟಿನಲ್ಲಿ ಕಾರ್ಮಿಕ ಇಲಾಖೆ ಮಹತ್ವದ ನಿರ್ಧಾರ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********